# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀಮತಿ ಉಮಾಶ್ರೀ ರವರು ಮಂಡಿಸಿರುವ ನಿಯಮ 72 ರ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ: ಮಕ್ಕಳಲ್ಲಿ ಪೌರಪ್ರಜ್ಞೆ, ಜಾಗೃತಿ, ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳು, ಆರೋಗ್ಯ, ರಕ್ಷಣೆ, ಶಾಲೆ, ಅಂಗನವಾಡಿ ಆವರಣದ ಸ್ವಚ್ಛತೆ ಸೇರಿದಂತೆ ಮಕ್ಕಳ ಕಲ್ಯಾಣಕ್ಕೆ ಸಂಬಂಧಿಸಿದ ವಿಚಾರಗಳನ್ನು ಮಕ್ಕಳ ಗ್ರಾಮ ಸಭೆ ಮೂಲಕ, ಮಕ್ಕಳಿಂದ ಹಾಗೂ ಮಕ್ಕಳ ಸಮ್ಮುಖದಲ್ಲೇ ಆಲಿಸಿ ಪರಿಹಾರಕ್ಕೆ ಮುಂದಾಗುವುದು ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಹಾಗೂ ಗ್ರಾಮ ಸಭೆಯ ಉದ್ದೇಶ , ಇದಕ್ಕೆ ಸಂಬಂಧಿಸಿದಂತೆ ನವೆಂಬರ್ 14 ರಿಂದ 10 ವಾರಗಳ ಕಾಲ ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ,ಅಭಿಯಾನ ಮತ್ತು ಮಕ್ಕಳ ಗ್ರಾಮ ಸಭೆ ನಡೆಸಲು ರಾಜ್ಯದ ಎಲ್ಲಾ 5,970 ಗ್ರಾಮಪಂಚಾಯತಿಗಳಿಗೂ ಗ್ರಾಮೀಣಾಭಿವೃದ್ಧಿ ಇಲಾಖೆ ಸುತ್ತೋಲೆ ಹೊರಡಿಸಲಾಗಿರುವುದು ಸರಿಯೆಷ್ಟೆ, ಆದರೆ ಇದರ ಅನುಷ್ಠಾನವಾಗಿಲ್ಲದ ಬಗ್ಗೆ.**

****

**ಉತ್ತರ:** ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಹಾಗೂ ಮಕ್ಕಳಲ್ಲಿ ಪೌರ ಪ್ರಜ್ಞೆ, ಜಾಗೃತಿ, ಮಕ್ಕಳ ಆರೋಗ್ಯ, ಮಕ್ಕಳ ರಕ್ಷಣೆ, ಮಕ್ಕಳ ಅಭಿವೃದ್ಧಿ ಮತ್ತು ಮಕ್ಕಳ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸುವ ಹಾಗೂ ಪೋಷಿಸುವ ಸಲುವಾಗಿ ಗ್ರಾಮ ಪಂಚಾಯಿತಿಗಳಿಂದ ಮಕ್ಕಳ ಗ್ರಾಮ ಸಭೆಯನ್ನು ನಡೆಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ1993 ರ ಅಧ್ಯಾಯ II ರ ಪ್ರಕರಣ 3(ಹೆಚ್)(2)(i)ರನ್ವಯ ಮಕ್ಕಳ ಗ್ರಾಮ ಸಭೆಯನ್ನು ನಡೆಸಲಾಗುತ್ತಿದೆ.

1. ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 14 ನವೆಂಬರ್ 2023 ರಿಂದ 24 ಜನವರಿ 2024 ರವರೆಗೆ, 10 ವಾರಗಳ "ಮಕ್ಕಳಿಗೆ ಸ್ಪಂದಿಸುವ ಗ್ರಾಮ ಪಂಚಾಯತಿ ಅಭಿಯಾನ" ಮತ್ತು **ಗ್ರಾಮ ಪಂಚಾಯತಿಗಳಲ್ಲಿ ಒಂದು ದಿನ** "ಮಕ್ಕಳ ವಿಶೇಷ ಗ್ರಾಮ ಸಭೆ" ನಡೆಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ನಿರ್ದೇಶನ ನೀಡಲಾಗಿದೆ.

2. "ಮಕ್ಕಳಿಗೆ ಸ್ಪಂದಿಸುವ ಗ್ರಾಮ ಪಂಚಾಯತಿ ಅಭಿಯಾನ" ದ ಅಂಗವಾಗಿ 10 ವಾರಗಳಲ್ಲಿ (ಪ್ರತಿವಾರ) ಈ ಕೆಳಗಿನ ಕಾರ್ಯಕ್ರಮ/ಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತೆ ತಿಳಿಸಲಾಗಿದೆ.

   - ಮಕ್ಕಳ ಜನನ ನೊಂದಣಿ ಮತ್ತು ಜನನ ಪ್ರಮಾಣ ಪತ್ರಗಳ ವಿತರಣೆ.
   - ಪೌಷ್ಠಿಕ ಆಹಾರ ಕುರಿತು ಮಾರ್ಗದರ್ಶನ ಹಾಗೂ ಜಾಗೃತಿ.
   - ಮಕ್ಕಳಿಗೆ ಚುಚ್ಚುಮದ್ದು ಪ್ರಾಮುಖ್ಯತೆ.
   - ಮಾನಸಿಕ ಆರೋಗ್ಯ ಸಂಬಂಧಿತ ಕಾರ್ಯಕ್ರಮಗಳು.

➤ ಶಾಲೆಯಿಂದ ಹೊರಗುಳಿದ ಹೆಣ್ಣು ಮಕ್ಕಳನ್ನು ಗುರುತಿಸಿ, ಮರಳಿ ಶಾಲೆಗೆ ಕರೆ ತರುವುದು.

3. ಕ್ಷೇತ್ರ ಮಟ್ಟದಲ್ಲಿ ಸ್ಥಳೀಯ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು, ಗ್ರಾಮ ಪಂಚಾಯಿತಿ ಶಿಕ್ಷಣ ಕಾರ್ಯಪಡೆ ಮುಂತಾದವುಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ 11-14 ವರ್ಷದ ಬಾಲಕಿಯರನ್ನು ಪುನಃ ಶಾಲೆಗೆ ಸೇರಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

4. ಪೂರ್ವಭಾವಿ ಸಿದ್ಧತೆಗಾಗಿ ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆ, ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ, ಬಾಲ ವಿಕಾಸ ಸಮಿತಿ, ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ, ಗ್ರಾಮ ಪಂಚಾಯತಿ ಗ್ರಂಥಾಲಯ ಸಲಹಾ ಸಮಿತಿ, ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಠಿಕತೆ ಸಮಿತಿಗಳ ಪ್ರತಿನಿಧಿಗಳು ಮತ್ತು ವಿವಿಧ ಇಲಾಖೆ/ಇಲಾಖೇತರ ಭಾಗೀದಾರರನ್ನೊಳಗೊಂಡಂತೆ ಪೂರ್ವಭಾವಿ ಸಭೆ ನಡೆಸಲು ತಿಳಿಸಲಾಗಿದೆ.

5. ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆಯ (ಅಧಿಕಾರಿ/ ಅಧಿಕಾರೇತರರಾಗಿರಬಹುದು) ಒಬ್ಬ ಸದಸ್ಯರನ್ನು 'ಪಂಚಾಯತಿ ಬಾಲಮಿತ್ರ' ಎಂದು ನೇಮಿಸಲಾಗುವುದು. ಇವರು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಲಾಗಿದೆ.

- ಜನವಸತಿ/ವಾರ್ಡ್/ಗ್ರಾಮ ಹಾಗೂ ಗ್ರಾಮ ಪಂಚಾಯತಿ ಮಟ್ಟದ ಮಕ್ಕಳ ಗ್ರಾಮ ಸಭೆ ನಡೆಯಲು ಸಮನ್ವಯ ಕಾರ್ಯ ಕೈಗೊಳ್ಳುವುದು.
- ಇವರು ಮಕ್ಕಳಿಗೆ ಸುಲಭವಾಗಿ ಸಿಗುವಂತಿರಬೇಕು
- ಮಕ್ಕಳ ಸಮಸ್ಯೆಗಳನ್ನು ಆಲಿಸಬೇಕು
- ಮಕ್ಕಳ ಸಂರಕ್ಷಣೆಗಾಗಿ ಕಾರ್ಯನಿರ್ವಹಿಸುವ ಭರವಸೆ ಮೂಡಿಸಬೇಕು
- ಮಕ್ಕಳಿಗೆ ಸಂಬಂಧಪಟ್ಟ ಸಮಸ್ಯೆಗಳ ಕೋರಿಕೆ ಪತ್ರಗಳನ್ನು ಮಕ್ಕಳಿಂದ ಸ್ವೀಕರಿಸುವುದು
- ಮಕ್ಕಳ ಗ್ರಾಮ ಸಭೆಗಳಲ್ಲಿ ಮೂಡಿಬಂದ ಮಕ್ಕಳ ಸಮಸ್ಯೆಗಳು/ ಬೇಡಿಕೆಗಳು/ ಪ್ರಶ್ನೆಗಳು ಸಭೆಯ ನಿರ್ಣಯಗಳಲ್ಲಿ ಬರುವಂತೆ ನೋಡಿಕೊಳ್ಳುವುದು.
- ಮಕ್ಕಳ ಹಕ್ಕುಗಳ ಗ್ರಾಮ ಸಭೆಯಲ್ಲಿ ಹಾಗೂ ಈ 10 ವಾರಗಳ ಅಭಿಯಾನದಲ್ಲಿ ಮೂಡಿಬಂದ ಅಂಶಗಳನ್ನು ಒಳಗೊಂಡ ಕ್ರಿಯಾ ಯೋಜನೆಯನ್ನು ತಯಾರಿಸಲು ಸಹಕರಿಸುವುದು.

6. ಮಕ್ಕಳಿಗೆ ಅಭಿಯಾನದ ಅಂಗವಾಗಿ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸುವುದು, ಶೈಕ್ಷಣಿಕ ಹಾಗೂ ವೃತ್ತಿ ಪರ ಮಾರ್ಗದರ್ಶನ ನೀಡುವುದು.

7. ಜಾಗೃತಿ ಕಾರ್ಯಕ್ರಮಗಳು

- ಮಕ್ಕಳ ಹಕ್ಕುಗಳು- ಬದುಕುವ, ಅಭಿವೃದ್ಧಿ ಹೊಂದುವ, ರಕ್ಷಣೆ ಮತ್ತು ಭಾಗವಹಿಸುವ ಹಕ್ಕುಗಳು
- ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಕಾನೂನು ಮತ್ತು ನಿಯಮಗಳ ಬಗ್ಗೆ ಅರಿವು ಕಾರ್ಯಕ್ರಮ
- ಉಪನ್ಯಾಸ ಹಾಗೂ ವಿಜ್ಞಾನ ಕಾರ್ಯಕ್ರಮಗಳು

8. ಪ್ರತಿ ಗ್ರಾಮ ಪಂಚಾಯತಿಯಿಂದ ಮಕ್ಕಳ ಹಕ್ಕುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಗ್ರಾಮ ಪಂಚಾಯತ್ ಫೇಸ್ ಬುಕ್ ರಚಿಸಲಾಗಿದ್ದು, ಫೇಸ್ ಬುಕ್ ಪೇಜ್‌ನಲ್ಲಿ ಮಕ್ಕಳಿಂದ ಬಂದ ಸಮಸ್ಯೆ / ಬೇಡಿಕೆ/ ಪ್ರಶ್ನೆಗಳನ್ನು ನಮೂದಿಸಲು ಹಾಗೂ ಮಕ್ಕಳು ಮತ್ತು ಮಕ್ಕಳ ಪರವಾಗಿ ಆಸಕ್ತರು/ಹಿತೈಷಿಗಳು ಮಕ್ಕಳ ಸಮಸ್ಯೆ/ಬೇಡಿಕೆಗಳ/ಪ್ರಶ್ನೆಗಳನ್ನು ಬರೆದು ಹಾಕಲು ಅನುಕೂಲವಾಗುವಂತೆ 'ಮಕ್ಕಳ ದನಿ' ಪೆಟ್ಟಿಗೆಯನ್ನು ಜನಸಂದಣಿ ಇರುವ ಸ್ಥಳಗಳಾದ ಶಾಲೆ, ವಸತಿ ನಿಲಯ, ಅಂಗನವಾಡಿ ಕೇಂದ್ರ, ಗ್ರಾಮ ಪಂಚಾಯಿತಿ ಕಛೇರಿ, ಹಾಲು ಉತ್ಪಾದಕರ ಸಹಕಾರ ಸಂಘ, ನ್ಯಾಯ ಬೆಲೆ ಅಂಗಡಿ ಇತ್ಯಾದಿ ಸಾರ್ವಜನಿಕ ಸ್ಥಳಗಳಲ್ಲಿ ಇರಿಸಿ, ಕೋರಿಕೆಗಳನ್ನು ಸಂಗ್ರಹಿಸಲಾಗುವುದು. ಜನವಸತಿ/ವಾರ್ಡ್ ಸಭೆ/ಗ್ರಾಮ ಮಟ್ಟದ ಮಕ್ಕಳ ಗ್ರಾಮ ಸಭೆಯಿಂದ ಸಮಸ್ಯೆ/ಕೋರಿಕೆಗಳನ್ನು ಸಂಗ್ರಹಿಸಿ, ಒಗ್ಗೂಡಿಸಿ, ಗ್ರಾಮ ಪಂಚಾಯಿತಿ ಮಟ್ಟದ ಮಕ್ಕಳ ಗ್ರಾಮ ಸಭೆಯಲ್ಲಿ ಮಂಡಿಸಲಾಗುವುದು.

9. **ಮೇಲ್ಕಂಡ ಚಟುವಟಿಕೆಗಳನ್ನು 10 ವಾರಗಳಲ್ಲಿ ಕೈಗೊಳ್ಳಲಾಗುವುದು. ಮಕ್ಕಳವಿಶೇಷ ಗ್ರಾಮ ಸಭೆಯನ್ನು** ದಿನಾಂಕ14 ನವೆಂಬರ್ 2023 ರಿಂದ 24 ಜನವರಿ 2024ರೊಳಗೆ, ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ನಿಗದಿಪಡಿಸಲಾದ ದಿನಾಂಕದಂದು ಅಗತ್ಯ ಪೂರ್ವ ತಯಾರಿಯೊಂದಿಗೆ ಗ್ರಾಮ ಪಂಚಾಯತಿಗಳಿಂದ ನಡೆಸುವಂತೆ ತಿಳಿಸಲಾಗಿದೆ.

10. **ಪ್ರಸ್ತುತ 5951 ಗ್ರಾಮ ಪಂಚಾಯಿತಿಗಳಲ್ಲಿ** 10 ವಾರಗಳ "ಮಕ್ಕಳಿಗೆ ಸ್ಪಂದಿಸುವ ಗ್ರಾಮ ಪಂಚಾಯತಿ ಅಭಿಯಾನ" ವನ್ನು ಪ್ರಾರಂಭಿಸಲು ಅಗತ್ಯ ಕ್ರಮವಹಿಸಲಾಗಿದೆ.

11. ಈವರೆಗೆ ರಾಜ್ಯದ ಒಟ್ಟು ಗ್ರಾಮ ಪಂಚಾಯತಿಗಳಲ್ಲಿ ದಿನಾಂಕ:29-11-2023 ರವರೆಗೆ 191 ಮಕ್ಕಳ ಸ್ನೇಹಿ ಗ್ರಾಮ ಪಂಚಾಯಿತಿ ಅಭಿಯಾನ ಮತ್ತು ಮಕ್ಕಳ ವಿಶೇಷ ಗ್ರಾಮ ಸಭೆಯನ್ನು ಪೂರ್ಣಗೊಳಿಸಲಾಗಿದ್ದು, ಇನ್ನುಳಿದ ಗ್ರಾಮ ಪಂಚಾಯತಿಗಳಲ್ಲಿ ಜನವರಿ 24, 2024 ರೊಳಗಾಗಿ ಪೂರ್ಣಗೊಳಿಸಲು ಅಗತ್ಯ ಸೂಚನೆ ನೀಡಲಾಗಿರುತ್ತದೆ.

ಸಂಖ್ಯೆ:RDPR 599 GPA 2023.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.